RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ–IVA | ಬೆಂಗಳೂರು, ಗುರುವಾರ, ಜೂನ್ ೨೯, ೨೦೧೭ (ಆಷಾಢ ೦೮, ಶಕ ವರ್ಷ ೧೯೩೯) | ನಂ. ೫೯೦ |
|---|---|---|
| ***Part–IVA*** | ***Bengaluru, Thursday, June 29, 2017 (Ashada 08, Shaka Varsha 1939)*** | ***No. 590*** |


**ಸಂಸದೀಯ ವ್ಯವಹಾರಗಳ ಸಚಿವಾಲಯ**

**ಅಧಿಸೂಚನೆ**

**ಸಂಖ್ಯೆ: ಸಂವ್ಯಶಾಇ 22 ಶಾಸನ 2016, ಬೆಂಗಳೂರು, ದಿನಾಂಕ: 29.06.2017**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2016 ಕ್ಕೆ 2017ರ ಜೂನ್ ತಿಂಗಳ 20ನೇ ದಿನಾಂಕದಂದು ರಾಷ್ಟ್ರಾಧ್ಯಕ್ಷರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31**

(2017ರ ಜೂನ್ 29ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016**

(2017ರ ಜೂನ್ 20ನೇ ದಿನಾಂಕದಂದು ರಾಷ್ಟ್ರಾಧ್ಯಕ್ಷರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು (2000ರ ಕರ್ನಾಟಕ ಅಧಿನಿಯಮ 28) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಅರವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.**– (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 6ನೇ ಪ್ರಕರಣದ ತಿದ್ದುಪಡಿ.**– ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ರ ಕರ್ನಾಟಕ ಅಧಿನಿಯಮ 28) 6ನೇ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:–

"ಪರಂತು, ಟೆಂಡರ್ ಆಹ್ವಾನಿಸುವ ಪ್ರಾಧಿಕಾರವು, ಅಧಿಸೂಚಿತ ಇಲಾಖೆಗಳಲ್ಲಿ ನಿಯಮಿಸಿದ ಪ್ರಕ್ರಿಯೆಗಳನ್ನು ಅನುಸರಿಸುವ ಮೂಲಕ ಕೈಗೊಳ್ಳಬೇಕಾದ ಅಗತ್ಯ ನೋಟೀಸುಗಳು, ಪತ್ರ ವ್ಯವಹಾರಗಳು ಮತ್ತು ಪ್ರಕಟಣೆಗಳನ್ನು ಹೊರಡಿಸುವಾಗ ನಿರ್ಮಾಣ ಕಾಮಗಾರಿಗಳ ಮೌಲ್ಯ 50 ಲಕ್ಷ ರೂಪಾಯಿಗಳಿಗೆ ಮೀರದ ಅಂಥ ಕಾಮಗಾರಿಗಳ ಶೇಕಡ 17.15ರಷ್ಟು ಸಂಖ್ಯೆಯನ್ನು ಮೀರದಂತೆ ಅನುಸೂಚಿತ ಜಾತಿಗಳ ವರ್ಗಕ್ಕೆ ಸೇರಿದವರಿಗೆ ಟೆಂಡರುದಾರರುಗಳ ಪೈಕಿ ಮಾತ್ರ ಟೆಂಡರನ್ನು ನೀಡತಕ್ಕದ್ದು ಮತ್ತು ಅಂಥ ಕಾಮಗಾರಿಗಳ ಶೇಕಡ 6.95ರಷ್ಟು ಸಂಖ್ಯೆಯನ್ನು ಮೀರದಂತೆ ಅನುಸೂಚಿತ ಪಂಗಡಗಳ ವರ್ಗಕ್ಕೆ ಸೇರಿದವರಿಗೆ ಟೆಂಡರುದಾರರುಗಳ ಪೈಕಿ ಮಾತ್ರ ಟೆಂಡರನ್ನು ನೀಡತಕ್ಕದ್ದು:

ಮತ್ತು ಪರಂತು, ಎರಡು ಬಾರಿಗಳಲ್ಲಿ ಆಹ್ವಾನಿಸಿರುವುದಕ್ಕೆ ಪ್ರತಿಕ್ರಿಯೆಯಾಗಿ ಅನುಸೂಚಿತ ಜಾತಿಗಳು ಅಥವಾ ಸಂದರ್ಭಾನುಸಾರವಾಗಿ ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಂದ ಟೆಂಡರ್ ಸ್ವೀಕರಿಸದಿದ್ದಲ್ಲಿ, ಅಂಥ ಕಾಮಗಾರಿಗಳನ್ನು ಇತರರಿಗೆ ಟೆಂಡರ್ ನೀಡಬಹುದು.

**ವಿವರಣೆ:**- ಈ ಪರಂತುಕದ ಉದ್ದೇಶಕ್ಕಾಗಿ,-

(1) "ಅನುಸೂಚಿತ ಜಾತಿಗಳು" ಭಾರತ ಸಂವಿಧಾನದ 341ನೇ ಅನುಚ್ಛೇದದ ಅಡಿಯಲ್ಲಿ ಮಾಡಿದ ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950ರ ಭಾಗ- VII ರಲ್ಲಿ ನಿರ್ದಿಷ್ಟಪಡಿಸಿದ ಮತ್ತು ಕಾಲಕಾಲಕ್ಕೆ ತಿದ್ದುಪಡಿಯಾದಂತೆ ಅನುಸೂಚಿತ ಜಾತಿಗಳ ಉಲ್ಲೇಖ ಹೊಂದಿರತಕ್ಕದ್ದು.

(2) "ಅನುಸೂಚಿತ ಪಂಗಡಗಳು" ಭಾರತ ಸಂವಿಧಾನದ 342ನೇ ಅನುಚ್ಛೇದದ ಅಡಿಯಲ್ಲಿ ಮಾಡಿದ ಸಂವಿಧಾನ (ಅನುಸೂಚಿತ ಪಂಗಡಗಳು) ಆದೇಶ, 1950ರ ಭಾಗ- VI ರಲ್ಲಿ ನಿರ್ದಿಷ್ಟಪಡಿಸಿದ ಮತ್ತು ಕಾಲಕಾಲಕ್ಕೆ ತಿದ್ದುಪಡಿಯಾದಂತೆ ಅನುಸೂಚಿತ ಪಂಗಡಗಳ ಉಲ್ಲೇಖ ಹೊಂದಿರತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ. ದ್ವಾರಕನಾಥ್ ಬಾಬು
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 500

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ–IVA | ಬೆಂಗಳೂರು, ಸೋಮವಾರ, ಜುಲೈ ೧೭, ೨೦೧೭ (ಆಷಾಢ ೨೬, ಶಕ ವರ್ಷ ೧೯೩೯) | ನಂ. ೬೯೨ |
|---|---|---|
| *Part–IVA* | *Bengaluru, Monday, July 17, 2017 (Ashada 26, Shaka Varsha 1939)* | *No. 692* |

**PARLIAMENTARY AFFAIRS SECRETARIAT**

**NOTIFICATION**

**NO. DPAL 22 SHASANA 2016, Bengaluru, dated: 17.07.2017**

Ordered that the translation of the ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016 (2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31) in the English language, be published as authorised by the Governor of Karnataka under clause (3) of Article 348 of the constitution of India in the Karnataka Gazette for general information.

The following translation of the ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016 (2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31) in the English language is published in the Official Gazette under the authority of the Governor of Karnataka under clause (3) of Article 348 of the Constitution of India.

**KARNATAKA ACT NO. 31 OF 2017**

(First Published in the Karnataka Gazette Extra-ordinary on the 29th day of June, 2017)

**THE KARNATAKA TRANSPARENCY IN PUBLIC PROCUREMENTS (AMENDMENT) ACT, 2016**

(Received the assent of the President on the 20th day of June, 2017)

An Act further to amend the Karnataka Transparency in Public Procurements Act, 1999.

Whereas it is expedient further to amend the Karnataka Transparency in Public Procurements Act, 1999 (Karnataka Act 28 of 2000) for the purposes hereinafter appearing;

Be it enacted by the Karnataka State Legislature in the sixty seventh year of the Republic of India as follows:-

**1. Short title and commencement.-** (1) This Act may be called the Karnataka Transparency in Public Procurements (Amendment) Act, 2016.

(2) It shall come into force at once.

**2. Amendment of section 6.-** In the Karnataka Transparency in Public Procurements Act, 1999 (Karnataka Act 28 of 2000), after Section 6, the following shall be inserted, namely:-

"Provided that, the tender inviting authority shall, in the notified Departments out of those construction works, value of which does not exceed Rs.50.00 Lakhs such number of works not exceeding 17.15 percent be tendered only among the tenderers belonging to the Scheduled Castes Category and such number of works not exceeding 6.95 percent be tendered only among tenderers belonging to the Scheduled Tribes Category, by taking out notices, communications and publications required to be taken following the prescribed procedures:

Provided further that, if no tender from persons belonging to the Scheduled Castes or Scheduled Tribes as the case may be, is received in response to the invitation in two attempts such works may be tendered among others.

**Explanation:-** For the purpose of this proviso,-

(1) "Scheduled Castes" shall have reference to the Scheduled Castes specified in part VII of the Constitution (Scheduled Castes) Order, 1950 made under Article 341 of the Constitution of India and as amended from time to time;

(2) "Scheduled Tribes" shall have reference to the Scheduled Tribes specified in part VI of the Constitution (Scheduled Tribes) Order, 1950 made under Article 342 of the Constitution of India and as amended from time to time;"

The above translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2016 (2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 31) be published in the Official Gazette under clause (3) of Article 348 of the Constitution of India.

**VAJUBHAI VALA**
**GOVERNOR OF KARNATAKA**

By order and in the name of the Governor of Karnataka,

**K. DWARAKANATH BABU**
Secretary to Government
Department of Parliamentary Affairs

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 400